ವಿಷಯ : ಪಾಜಕ ಕ್ಷೇತ್ರದಲ್ಲಿ ಗಣಿಗಾರಿಕೆ ನಡೆಯುತ್ತಿರುವ ವಿಚಾರ.

1422(1981)-ಶ್ರೀ ಕೆ. ಎಸ್. ಈಶ್ವರಪ್ಪ (ಶಿವಮೊಗ್ಗ) : ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಶ್ರೀಮಾನ್ ಮಧ್ವಾಚಾರ್ಯರ ಜನ್ಮ ಸ್ಥಳವಾದ ಪಾಜಕ್ ಕ್ಷೇತ್ರದಲ್ಲಿ ಗಣಿಗಾರಿಕೆ ನಡೆಯುತ್ತಿರುವುದನ್ನು ನಿಲ್ಲಿಸುವ ಆಶ್ವಾಸನೆಯನ್ನು ಸರ್ಕಾರ ನೀಡಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಸದರಿ ಗಣಿಗಾರಿಕೆ ನಡೆಯುವುದನ್ನು ನಿಲ್ಲಿಸಲಾಗಿದೆಯೇ?

ಇ) ಹಾಗಿದ್ದಲ್ಲಿ ಕಾರ್ಮಿಕರ ಹಿತದೃಷ್ಟಿಯಿಂದ ಪರ್ಯಾಯ ವ್ಯವಸ್ಥೆ ಏನಾದರೂ ಮಾಡಿದೆಯೇ?

ಶ್ರೀ ಎಸ್. ಡಿ. ಜಯರಾಮ್ (ಗಣಿ ಮತ್ತು ಭೂವವಿಜ್ಞಾನ ಸಚಿವರು.)

ಅ) ಶಿವಮೊಗ್ಗ ಜಿಲ್ಲೆಯ ಅರಣ್ಯ ಪ್ರದೇಶದಲ್ಲಿ ಗಣಿಗಾರಿಕೆಗೆ ಅನುಮತಿ ನೀಡುವುದರ ಬಗ್ಗೆ ವಿಧಾನ ಸಭೆಯಲ್ಲಿ ನಡೆದ ಚರ್ಚೆಯ ಸಮಯದಲ್ಲಿ ಉಪ ಪ್ರಶ್ನೆಗಳಿಗೆ ಉತ್ತರಿಸುವಾಗ ಪಾಜಕ ಕ್ಷೇತ್ರದಲ್ಲಿ ಗಣಿಗಾರಿಕೆಯನ್ನು ನಿಲ್ಲಿಸಲಾಗಿದೆ ಎಂದು ತಿಳಿಸಲಾಗಿತ್ತು. ಆದರೆ ಈ ಅಂಶವನ್ನು ಪುನಃ ಪರಿಶೀಲಿಸಲಾಗಿ ಅಲ್ಲಿ ಗಣಿಗಾರಿಕೆ ನಡೆಯುತ್ತಿರುವುದು ತಿಳಿದು ಬಂದ ಕಾರಣ, ಈ ವಿಷಯವಾಗಿ ಕಳೆದ ಅಧಿವೇಶನದಲ್ಲಿ ಕಾಲಾಭಾವದಿಂದ ಸಭೆಯಲ್ಲಿ ಸ್ಪಷ್ಟೀಕರಣ ನೀಡಲು ಆಗದಿದ್ದ ಪ್ರಯುಕ್ತ ವಿಧಾನ ಸಭೆಯ ಮಾನ್ಯ ಸಭಾಧ್ಯಕ್ಷರಿಗೆ ಪತ್ರ ಮುಖೇನ ಸ್ಪಷ್ಟೀಕರಣ ನೀಡಲಾಗಿದೆ.

ಆ) ಪಾಜಕ ಕ್ಷೇತ್ರದ ವ್ಯಾಪ್ತಿಯಲ್ಲಿನ ಪ್ರದೇಶದಲ್ಲಿ ಕಲ್ಲುಗಣಿಗಾರಿಕೆಯಿಂದ ಪರಿಸರಕ್ಕೆ ಹಾನಿಯುಂಟಾಗಿದ್ದಲ್ಲಿ ಇದನ್ನು ಕಾಪಾಡುವ ಬಾಧ್ಯತೆ ಸರ್ಕಾರದ್ದಾಗಿರುವುದರಿಂದ ಈ ಸಮಸ್ಯೆಯನ್ನು ಕೂಲಂಕುಷವಾಗಿ ಪರಿಶೀಲಿಸಲು ಒಂದು ತಜ್ಞರ ಸಮಿತಿಯನ್ನು ಸರ್ಕಾರ ಆದೇಶ ಸಂಖ್ಯೆ: ಆಪಜೀ 48 ಇಎಸ್‌ವಿ 97 ದಿನಾಂಕ 17-3-97ರ ಪ್ರಕಾರ ರಚಿಸಲಾಗಿದೆ. ಸದರಿ ಸಮಿತಿಯು ಪಾಜಕ ಕ್ಷೇತ್ರಕ್ಕೆ ದಿ:25-3-97 ರಂದು ಭೇಟಿ ನೀಡಿದ್ದು ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿ ಕಲ್ಲುಗಾಣಿಗಾರಿಕೆಯಿಂದ ಈ ಪವಿತ್ರ ಸ್ಥಳಕ್ಕೆ ಆಲ್ಲಿನ ಆಗುತ್ತಿರುವ ಸಾಧಕ ಭಾಧಕಗಳನ್ನು ಗಣನೆಗೆ ತೆಗೆದು ಕೊಂಡು, ಹಾಲಿ ಅಲ್ಲಿ ನಡೆಯುತ್ತಿರುವ ಕಲ್ಲು ಅವಶ್ಯ ಗಣಿಗಾರಿಕೆ ನಿಲ್ಲಿಸುವ ಬಗ್ಗೆ ಹಾಗೂ ಈ ಪುಣ್ಯ ಕತೆಕ್ಷೇತ್ರವನ್ನು ಸಂರಕ್ಷಿಸುವ ಬಗ್ಗೆ ತೆಗೆದುಕೊಳ್ಳಬಹುದಾದ ಮಾರ್ಗೋಪಾಯಗಳ ಕುರಿತು ವರದಿ ಸಲ್ಲಿಸಲು ಸರ್ಕಾರ ಸೂಚಿಸಿದೆ.

ಇ) ಈ ಅಂಶವನ್ನು ಸೂಕ್ತ ಸಂದರ್ಭದಲ್ಲಿ ಸಮಾಲೋಚಿಸಲಾಗುವುದು.